ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೌಶಲ್ಯಾಭಿವೃದ್ಧಿ ಇಲಾಖೆ ವತಿಯಿಂದ ತರಬೇತಿ ನೀಡಿರುವ ಕುರಿತು

ಶ್ರೀ ಪಿ. ಆರ್. ರಮೇಶ್(ನಾಮನಿರ್ದೇಶನ ಹೊಂದಿದವರು) –

95 (93) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ ನಿರುದ್ಯೋಗ ನಿವಾರಣೆ ಸಲುವಾಗಿ ನೀಡಿರುವ ಆರ್ಥಿಕ ನೆರವು ಹಾಗೂ ಕಾರ್ಯಕ್ರಮಗಳು ಮತ್ತು ಯೋಜನೆಗಳ ವರ್ಷವಾರು ಮಾಹಿತಿ ನೀಡುವುದು;

(ಆ) ಕಳೆದ 5 ವರ್ಷಗಳಲ್ಲಿ ಇಲಾಖೆ ವತಿಯಿಂದ ಆಯೋಜಿಸಿರುವ ತರಬೇತಿಯನ್ನು ಪಡೆದವರ ಸಂಖ್ಯೆ ಮತ್ತು ವೆಚ್ಚದ ಕುರಿತು ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು;

(ಇ) ಇಲಾಖೆ ವತಿಯಿಂದ ತರಬೇತಿ ಪಡೆದ ಎಷ್ಟು ಜನರಿಗೆ ಖಾಸಗಿ/ಸರ್ಕಾರಿ ಉದ್ಯೋಗ ಲಭಿಸಿದೆ; (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಈ) ಇಲಾಖೆ ವತಿಯಿಂದ ತರಬೇತಿ ಪಡೆದ ಎಷ್ಟು ಜನರಿಗೆ ಸ್ವ-ಉದ್ಯೋಗ ಮಾಡಲು ಬ್ಯಾಂಕ್ ಮತ್ತು ಇತರೆ ಹಣಕಾಸು ಸಂಸ್ಥೆಗಳ ಮೂಲಕ ಸಾಲ ಸೌಲಭ್ಯವನ್ನು ಪಡೆಯಲು ಇಲಾಖೆ ಸಹಾಯ ಮಾಡಿದೆ? (ಜಿಲ್ಲಾವಾರು, ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)